ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/03/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
ದಿನಾಂಕ: 02.04.2024

## ಸುತ್ತೋಲೆ

ವಿಷಯ: ಮೇ 2024ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಬಗ್ಗೆ ಮಾಹಿತಿ

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ:DTE-ADMIOACM2/61/2023 ದಿ:20.10.2023

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇ 2024ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಕುರಿತು ವಿವಿಧ ಹಂತದ ಪರೀಕ್ಷಾ ಕಾರ್ಯಗಳಿಗೆ ಈ ಕೆಳಗಿನಂತೆ ದಿನಾಂಕಗಳನ್ನು ನಿಗಧಿ ಮಾಡಲಾಗಿದ್ದು, ಸಂಬಂಧಪಟ್ಟ ಉಪನ್ಯಾಸಕರು/ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವಂತೆ ತಿಳಿಸಲಾಗಿದೆ.

| | | |
|---|---|---|
| 1 | ಪ್ರಸಕ್ತ ಶೈಕ್ಷಣಿಕ ಸಾಲಿನ 2, 4 ಮತ್ತು 6 ನೇ ಸೆಮಿಸ್ಟರ್ ತರಗತಿಗಳ ಶೈಕ್ಷಣಿಕ ಅವಧಿಯ ಮುಕ್ತಾಯ | ದಿನಾಂಕ:30.04.2024 |
| 2 | ಪ್ರಾಯೋಗಿಕ ಪರೀಕ್ಷೆಗಳ ಪ್ರಾರಂಭ ಮತ್ತು ಮುಕ್ತಾಯ | ದಿನಾಂಕ: 09.05.2024 ರಿಂದ 20.05.2024 ರವರೆಗೆ |
| 3 | C-03, C-09 , C-15 ಪಠ್ಯಕ್ರಮದ ವಿದ್ಯಾರ್ಥಿಗಳಿಗೆ ಥಿಯರಿ ಪರೀಕ್ಷೆಗಳ ಪ್ರಾರಂಭ ಮತ್ತು ಮುಕ್ತಾಯ | ದಿನಾಂಕ: 13.05.2024 ರಿಂದ 20.05.2024 ರವರೆಗೆ |
| 4 | C-20 ಪಠ್ಯಕ್ರಮದ ಸಿ.ಪಿ. ವಿಭಾಗದ ವಿದ್ಯಾರ್ಥಿಗಳಿಗೆ ಥಿಯರಿ ಪರೀಕ್ಷೆಗಳ ಪ್ರಾರಂಭ ಮತ್ತು ಮುಕ್ತಾಯ | ದಿನಾಂಕ: 20.05.2024 ರಿಂದ 31.05.2024 ರವರೆಗೆ |
| 5 | C -20 ಪಠ್ಯಕ್ರಮದ ಇತರೆ ಎಲ್ಲಾ ವಿಭಾಗದ ವಿದ್ಯಾರ್ಥಿಗಳಿಗೆ ಥಿಯರಿ ಪರೀಕ್ಷೆಗಳ ಪ್ರಾರಂಭ ಮತ್ತು ಮುಕ್ತಾಯ | ದಿನಾಂಕ: 22.05.2024 ರಿಂದ 31.05.2024 ರವರೆಗೆ |
| 6 | ಪಾಲಿಟೆಕ್ನಿಕ್ ಸಂಸ್ಥೆಗಳು BTELinx ವೆಬ್‌ಪೋರ್ಟಲ್ ಮೂಲಕ ಮೌಲ್ಯಮಾಪಕರ / ಪರೀಕ್ಷಕರ ಪಟ್ಟಿಯನ್ನು ನವೀಕರಿಸುವುದು/ ಇಂದೀಕರಿಸುವುದು (ಮೌಲ್ಯಮಾಪಕರು/ ಪರೀಕ್ಷಕರುಗಳ ಜೊತೆಗೆ ಪ್ರಾಂಶುಪಾಲರಾಗಿ ಕಾರ್ಯ ನಿರ್ವಹಿಸುತ್ತಿರುವವರ ಹೆಸರು, ಚಾಲ್ತಿಯಲ್ಲಿರುವ ಮೊ.ಸಂಖ್ಯೆ. ಹಾಗೂ ಇ-ಮೇಲ್ ವಿಳಾಸಗಳನ್ನು BTELinx ವೆಬ್‌ಪೋರ್ಟಲ್‌ನಲ್ಲಿನ Staff list ನಲ್ಲಿ ಅಪ್‌ಡೇಟ್ ಮಾಡುವುದು ಕಡ್ಡಾಯವಾಗಿರುತ್ತದೆ.) | ದಿನಾಂಕ:03.04.2024 ರಿಂದ 12.04.2024 ರವರೆಗೆ |
| 7 | ಸಂಸ್ಥೆಗಳಲ್ಲಿ ಮಾಸ್ಟರ್ ಕ್ಯಾಂಡಿಡೇಟ್ ಲಿಸ್ಟ್ ಅನ್ನು ಆನ್‌ಲೈನ್ ಮೂಲಕ ಇಂದೀಕರಿಸುವುದು/ನವೀಕರಿಸುವುದು | ದಿನಾಂಕ: 05.04.2024 ರಿಂದ 15.04.2024 ರವರೆಗೆ |
| 8 | ಆಂತರಿಕ ಅಂಕಗಳನ್ನು ಪರಿವೀಕ್ಷಕರು ಪರಿಶೀಲಿಸುವುದು ಮತ್ತು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು | ದಿನಾಂಕ:02.05.2024 ರಿಂದ 06.05.2024 ರವರೆಗೆ |
| 9 | ಪ್ರಾಯೋಗಿಕ ಪರೀಕ್ಷಕರ ಪಟ್ಟಿಯನ್ನು ಆನ್‌ಲೈನ್‌ನಲ್ಲಿ(BTELinx) ಪಾಲಿಟೆಕ್ನಿಕ್‌ಗಳಿಗೆ ಕಳುಹಿಸುವುದು | ದಿನಾಂಕ:06.05.2024 |
| 10 | ಸಂಸ್ಥೆಗಳು ಆನ್ ಲೈನ್‌ನಲ್ಲಿ (BTELinx) ಪ್ರವೇಶ ಪತ್ರಗಳನ್ನು ಮುದ್ರಿಸುವುದು | ದಿನಾಂಕ:07.05.2024 ರಿಂದ |

ಸಂಸ್ಥೆಗಳಲ್ಲಿ ಪ್ರಿನ್ಸಿಪಾಲರು ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್ ಅನ್ನು ತಾವೇ ಸ್ವತ: ಉಪಯೋಗಿಸುವುದರ ಜೊತೆಗೆ ಕನಿಷ್ಠ ಇಬ್ಬರು ಹಿರಿಯ ವಿಭಾಗಾಧಿಕಾರಿಗಳನ್ನು ವೆಬ್‌ಪೋರ್ಟಲ್ ಉಪಯೋಗಿಸಲು ಕಡ್ಡಾಯವಾಗಿ ನಿಯುಕ್ತಿಗೊಳಿಸಲು ತಿಳಿಸಲಾಗಿದೆ.

ಪರೀಕ್ಷಾ ದಿನಾಂಕಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಪ್ರಯುಕ್ತ ಪ್ರಸಕ್ತ ಸಾಲಿನ ಎಲ್ಲಾ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ, ಸದರಿ ಶೈಕ್ಷಣಿಕ ವರ್ಷದ ಪಠ್ಯಕ್ರಮವನ್ನು ವಿಶೇಷ ತರಗತಿಗಳನ್ನು ನಡೆಸುವುದೂ ಸೇರಿದಂತೆ ಪಾಠ ಪ್ರವಚನಗಳನ್ನು ನಿಗಧಿತ ಅವಧಿಯಲ್ಲಿ ಪೂರೈಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:

ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ: 1. ಕಂಪ್ಯೂಟರ್ ವಿಭಾಗಕ್ಕೆ
2. ಇಸಿಎಸ್/ಇಎಫ್‌ಎಸ್/ಇಎಪಿ/ಇಆರ್‌ಎಸ್ ವಿಭಾಗಗಳಿಗೆ
3. ಇ ಗವರ್ನೆನ್ಸ್ ವಿಭಾಗಕೆ
4. ಕಾರ್ಯದರ್ಶಿಯವರ ಆಪ್ತ ಶಾಖೆಗೆ